8188

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2062
2. ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 17.03.2022
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರ ಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಅಧೀನದಲ್ಲಿರುವ ಸರ್ಕಾರಿ ಇಲಾಖೆಗಳೆಷ್ಟು; | ರಾಜ್ಯ ಸರ್ಕಾರದ ಅಧೀನದಲ್ಲಿ ಒಟ್ಟು 38 ಪ್ರಧಾನ ಇಲಾಖೆಗಳಿವೆ. |
| ಆ) | ಈ ಇಲಾಖೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು; ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು (ವಿವರ ನೀಡುವುದು); | ಈ ಇಲಾಖೆಗಳಲ್ಲಿ ಮಂಜೂರಾಗಿರುವ, ಖಾಲಿ ಇರುವ ಹಾಗೂ ಭರ್ತಿಯಾದ ಹುದ್ದೆಗಳ ವಿವರವನ್ನು ಅನುಬಂಧದಲ್ಲಿ ಇರಿಸಿದೆ. |
| ಇ) | ಹೆಚ್ಚು ಹುದ್ದೆಗಳು ಖಾಲಿ ಇರುವುದರಿಂದ ಹಾಲಿ ನೌಕರರ ಮೇಲೆ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೆಚ್ಚು ಹುದ್ದೆಗಳು ಖಾಲಿ ಇರುವುದರಿಂದ ಹಾಲಿ ನೌಕರರ ಮೇಲೆ ಒತ್ತಡ ಹೆಚ್ಚಾಗಿದೆ ಹಾಗೂ ಆಡಳಿತ ಸುಧಾರಣೆಗೂ ಅಡಚಣೆಯಾಗುತ್ತಿದೆ. |
| ಈ) | ಬಂದಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಇಲಾಖಾ ಮುಖ್ಯಸ್ಥರುಗಳು ಸಚಿವಾಲಯದ ಆಡಳಿತ ಇಲಾಖೆಗಳ ಮೂಲಕ ಆರ್ಥಿಕ ಇಲಾಖೆಯ ಸಹಮತಿ ಪಡೆದು ಕ್ರಮ ವಹಿಸಬೇಕಾಗಿರುತ್ತದೆ. ಆಡಳಿತ ಇಲಾಖೆಯಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ ಅಗತ್ಯತೆಗೆ ತಕ್ಕಂತೆ ಹೊಸ ಹುದ್ದೆಗಳನ್ನು ಸೃಜಿಸಲು ಹಾಗೂ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಯನ್ನು ನೀಡುತ್ತಿದೆ. ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ಪಡೆದ ನಂತರ ಇಲಾಖೆಗಳು ಖಾಲಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಇತರ ಆಯ್ಕೆ ಪ್ರಾಧಿಕಾರಗಳ ಮುಖಾಂತರ ಭರ್ತಿ ಮಾಡುತ್ತಿದೆ. ಇದಲ್ಲದೆ, ಖಾಲಿ ಹುದ್ದೆಗಳು ಭರ್ತಿಯಾಗುವವರೆಗೂ ತಾತ್ಕಾಲಿಕವಾಗಿ ಅಧಿಕ ಪ್ರಭಾರ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಜೊತೆಗೆ, ಮುಂಬಡ್ತಿ, ಅಧಿಕ ಪ್ರಭಾರ, ನಿಯೋಜನೆ, ಅನ್ಯಸೇವೆ, ಗುತ್ತಿಗೆ, ಹೊರಗುತ್ತಿಗೆ ಇವುಗಳ ಮೂಲಕ ಸಿಬ್ಬಂದಿ ಕೊರತೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಸಿಆಸುಇ 43 ಸೇವನೆ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.



Generated from eOffice by G JAGADEESHA, CMO-JS(GJ), JOINT SECREATRY, CMO on 16/03/2022 04:42 PM

## ಪೂರಕ ಟಿಪ್ಪಣಿ

ಕರ್ನಾಟಕ ಸರ್ಕಾರ (ಕೆಲಸಗಳ ಹಂಚಿಕೆ) ನಿಯಮಗಳು 1977 ರನ್ವಯ ಪ್ರಸ್ತುತ ರಾಜ್ಯ ಸರ್ಕಾರದ ಅಧೀನದಲ್ಲಿ ಒಟ್ಟು 38 ಪ್ರಧಾನ ಇಲಾಖೆಗಳಿವೆ. ಆರ್ಥಿಕ ಇಲಾಖೆಯು ನೀಡಿರುವ ಮಾಹಿತಿಯನುಸಾರ ಕೆಲವು ಇಲಾಖೆಗಳಲ್ಲಿ ಕಾರ್ಯಾನುಕೂಲ ಮತ್ತು ಯೋಜನೆಗಳ ಕ್ರಮಬದ್ಧ ಅನುಷ್ಠಾನಕ್ಕಾಗಿ ಉಪ ಇಲಾಖೆಗಳಾಗಿ ವಿಭಾಗಿಸಿರುವುದು ಕಂಡು ಬರುತ್ತದೆ. ಆರ್ಥಿಕ ಇಲಾಖೆಯ ಮಾಹಿತಿಯನ್ವಯ ಈ ಇಲಾಖೆಗಳಲ್ಲಿ 2021-22 ನೇ ಸಾಲಿನಲ್ಲಿರುವಂತೆ ಒಟ್ಟು 7,68,975 ಮಂಜೂರಾದ ಹುದ್ದೆಗಳಿವೆ. ಇವುಗಳಲ್ಲಿ 5,16,073 ಹುದ್ದೆಗಳನ್ನು ಭರ್ತಿಮಾಡಲಾಗಿದ್ದು 2,52,902 ಹುದ್ದೆಗಳು ಖಾಲಿ ಇರುತ್ತವೆ. ಕೋವಿಡ್-19ರ ಸಾಂಕ್ರಾಮಿಕ ಹಿನ್ನೆಲೆಯಲ್ಲಿ ಹುದ್ದೆಗಳನ್ನು ನಿರಂತರವಾಗಿ ಭರ್ತಿ ಮಾಡಲು ಸಾಧ್ಯವಾಗದ ಹಿನ್ನೆಲೆಯಲ್ಲಿ, ಖಾಲಿ ಹುದ್ದೆಗಳ ಸಂಖ್ಯೆಯು ಸ್ವಲ್ಪಮಟ್ಟಿಗೆ ಹೆಚ್ಚಾಗಿರುತ್ತದೆ. ಇದರಿಂದಾಗಿ ಹಾಲಿ ನೌಕರರ ಮೇಲೆ ಕಾರ್ಯದೊತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆಬಂದಿರುತ್ತದೆ.

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಇಲಾಖಾ ಮುಖ್ಯಸ್ಥರುಗಳು ಸಚಿವಾಲಯದ ಆಡಳಿತ ಇಲಾಖೆಗಳ ಮೂಲಕ ಆರ್ಥಿಕ ಇಲಾಖೆಯ ಸಹಮತಿ ಪಡೆದು ಕ್ರಮ ವಹಿಸಬೇಕಾಗಿರುತ್ತದೆ. ಆಡಳಿತ ಇಲಾಖೆಯಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ ಅಗತ್ಯತೆಗೆ ತಕ್ಕಂತೆ ಹೊಸ ಹುದ್ದೆಗಳನ್ನು ಸೃಜಿಸಲು ಹಾಗೂ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಯನ್ನು ನೀಡುತ್ತಿದೆ. ಖಾಲಿ ಹುದ್ದೆಗಳನ್ನು ತುಂಬಲು ಅನುಮತಿ ಪಡೆದ ನಂತರ ಇಲಾಖೆಗಳು ಖಾಲಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗ ಹಾಗೂ ಇತರ ಆಯ್ಕೆ ಪ್ರಾಧಿಕಾರಗಳ ಮುಖಾಂತರ ಭರ್ತಿ ಮಾಡುತ್ತಿದೆ. ಇದಲ್ಲದೆ, ಖಾಲಿ ಹುದ್ದೆಗಳು ಭರ್ತಿಯಾಗುವವರೆಗೂ ತಾತ್ಕಾಲಿಕವಾಗಿ ಅಧಿಕ ಪ್ರಭಾರ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಅಲ್ಲದೆ, ಮುಂಬಡ್ತಿ, ಅಧಿಕ ಪ್ರಭಾರ, ನಿಯೋಜನೆ, ಅನ್ಯಸೇವೆ, ಗುತ್ತಿಗೆ, ಹೊರಗುತ್ತಿಗೆ ಇವುಗಳ ಮೂಲಕ ಸಿಬ್ಬಂದಿ ಕೊರತೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

***